ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂಡಾಧಿಕಾರಿಯವರ ನ್ಯಾಯಾಲಯ, ಪೊನ್ನಂಪೇಟೆ.

**ಸಿ.ಸಿ ನಂ. 1033/2019 .**

ದಿನಾಂಕ : 24 ನೇ ಜುಲೈ 2024 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ- ಪಿರ್ಯಾದಿ ಪರ ವಕೀಲರಿಂದ : -

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ವನ್ನು ಸಹಿ ಮಾಡಿ ಸಲ್ಲಿಸಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿರುತ್ತದೆ. ಈ ಕೇಸಿಗೆ ಸಂಬಂಧಪಟ್ಟಂತೆ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ, ಸದರಿ ದಾಖಲೆಗಳನ್ನು ಈ ಮುಂದಿನಂತೆ ಗುರುತಿಸಲಾಗಿರುತ್ತದೆ.

ಆರೋಪಿ ನೀಡಿದ ದಿನಾಂಕ 18.07.2019 ರ ಚೆಕ್ ಅನ್ನು ನಿ ಪಿ 1 ಎಂದು ಗುರುತಿಸಲಾಯಿತು ಹಾಗೂ ನಿ ಪಿ 1 ರಲ್ಲಿರುವ ಆರೋಪಿಯ ಸಹಿಯನ್ನು ಸಾಕ್ಷಿಯು ಗುರುತಿಸಿದ ಮೇರೆಗೆ ಆರೋಪಿಯ ಸಹಿಯನ್ನು ನಿ ಪಿ 1 ಎ ಎಂದು ಗುರುತಿಸಲಾಯಿತು. ಬ್ಯಾಂಕಿನವರು ನೀಡಿದ ದಿನಾಂಕ 20.07.2019 ರ ಹಿಂಬರಹವನ್ನು ನಿ ಪಿ 2 ಎಂದು, ದಿನಾಂಕ 05.08.2019 ವಕೀಲರ ಮೂಲಕ ನೀಡಿದ ನೋಟೀಸಿನ ಕಛೇರಿ ಪ್ರತಿಯನ್ನು ನಿ ಪಿ 3 ಎಂದು, ಅಂಚೆ ರಶೀದಿಯನ್ನು ನಿ ಪಿ 4 ಎಂದು, ಅಂಚೆ ಸ್ವೀಕೃತಿಯನ್ನು ನಿಪಿ 5 ಎಂದು, ಅನುಮತಿ ಪತ್ರ ವನ್ನು ನಿ ಪಿ6 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಪಾಟೀ ಸವಾಲಿಗೆ ಸಮಯ ಕೇಳಲಾಗಿ ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಖ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲಾಗಿರುತ್ತದೆ)
ಓದಿ ಹೇಳಿ ಕೇಳಿಸಿ ಸರಿ ಇದೆ ಎಂದು ಒಪ್ಪಿದೆ.

Sd/xxx-

(ಸಾಕ್ಷಿಯವರ ಸಹಿ)

ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ.,ಪೊನ್ನಂಪೇಟೆ.